## ಕರ್ನಾಟಕ ಸರ್ಕಾರದ ನಡವಳಿ

ವಿಷಯ: 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ಬೋಧಕ ವರ್ಗದವರು ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಯಲ್ಲಿರುವ ನ್ಯಾಯಾಂಗ ಅಧಿಕಾರಿಗಳು/ಎನ್‌ಜೆಪಿಸಿ ನಿವೃತ್ತಿ ವೇತನದಾರರ ತುಟ್ಟಿ ಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ:

1. ಸ.ಆ. ಸಂಖ್ಯೆ: ಎಫ್‌ಡಿ 10 ಎಸ್‌ಆರ್‌ಪಿ 2013, ದಿನಾಂಕ: 20-05-2013.
2. ಸ.ಆ. ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2013(II), ದಿನಾಂಕ: 12-06-2013.
3. ಸ.ಆ. ಸಂಖ್ಯೆ: ಎಫ್‌ಡಿ 22 ಎಸ್‌ಆರ್‌ಪಿ 2013, ದಿನಾಂಕ: 10-10-2013.
4. ಸ.ಆ. ಸಂಖ್ಯೆ: ಎಫ್‌ಡಿ 07 ಎಸ್‌ಆರ್‌ಪಿ 2014, ದಿನಾಂಕ: 11-04-2014.
5. ಸ.ಆ. ಸಂಖ್ಯೆ: ಎಫ್‌ಡಿ 18 ಎಸ್‌ಆರ್‌ಪಿ 2014, ದಿನಾಂಕ: 01-10-2014.
6. ಸ.ಆ. ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2015, ದಿನಾಂಕ: 08-05-2015.
7. ಸ.ಆ. ಸಂಖ್ಯೆ: ಎಫ್‌ಡಿ 19 ಎಸ್‌ಆರ್‌ಪಿ 2015 ದಿನಾಂಕ: 08-10-2015.
8. ಸ.ಆ. ಸಂಖ್ಯೆ: ಎಫ್‌ಡಿ 18 ಎಸ್‌ಆರ್‌ಪಿ 2016 ದಿನಾಂಕ: 18-04-2016
9. ಸ.ಆ. ಸಂಖ್ಯೆ: ಎಫ್‌ಡಿ 34 ಎಸ್‌ಆರ್‌ಪಿ 2016 ದಿನಾಂಕ: 28-10-2016.
10. ಸ.ಅ. ಸಂಖ್ಯೆ: ಎಫ್‌ಡಿ 19 ಎಸ್‌ಆರ್‌ಪಿ 2017 ದಿನಾಂಕ: 04-04-2017.
11. ಸ.ಆ. ಸಂಖ್ಯೆ: ಆಇ 40 ಎಸ್‌ಆರ್‌ಪಿ 2017 ದಿನಾಂಕ: 16-10-2017.
12. ಸ.ಆ. ಸಂಖ್ಯೆ: ಆಇ 11 ಎಸ್‌ಆರ್‌ಪಿ 2018 ದಿನಾಂಕ: 23-06-2018.
13. ಸ.ಆ. ಸಂಖ್ಯೆ: ಆಇ 26 ಎಸ್‌ಆರ್‌ಪಿ 2018 ದಿನಾಂಕ: 30-10-2018.
14. ಸ.ಆ. ಸಂಖ್ಯೆ: ಆಇ 2 ಎಸ್‌ಆರ್‌ಪಿ 2019 ದಿನಾಂಕ: 03-05-2019.

**ಸರ್ಕಾರಿ ಆದೇಶ ಸಂಖ್ಯೆ: ಆಇ 17 ಎಸ್‌ಆರ್‌ಪಿ 2019**
**ಬೆಂಗಳೂರು, ದಿನಾಂಕ: 2ನೇ ನವೆಂಬರ್ 2019**

2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ ವೇತನ ಶ್ರೇಣಿಗಳಲ್ಲಿರುವ ಬೋಧಕ ಸಿಬ್ಬಂದಿಗಳಿಗೆ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಯಲ್ಲಿರುವ ನ್ಯಾಯಾಂಗ ಅಧಿಕಾರಿಗಳಿಗೆ ಹಾಲಿ ಲಭ್ಯವಿರುವ ತುಟ್ಟಿ ಭತ್ಯೆಯ ದರವನ್ನು ಮೂಲ ವೇತನದ **ಶೇ.154** ರಿಂದ **ಶೇ.164**ಕ್ಕೆ **ದಿನಾಂಕ 1ನೇ ಜುಲೈ 2019** ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ **'ಮೂಲ ವೇತನ'** ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಪಡೆಯುವ ವೇತನ.

3. ಮೂಲ ವೇತನಕ್ಕೆ ಇತರೆ ಯಾವುದೇ ಉಪಲಬ್ದಗಳನ್ನು ಸೇರಿಸತಕ್ಕದ್ದಲ್ಲ.

4. ಇತ್ತೀಚೆಗೆ ವೇತನ ಶ್ರೇಣಿಗಳನ್ನು ಪರಿಷ್ಕರಿಸಲ್ಪಟ್ಟ ಮತ್ತು 2016ರ ಪರಿಷ್ಕೃತ ಯುಜಿಸಿ/ಐಸಿಎಆರ್ ವೇತನ ಶ್ರೇಣಿಗಳಲ್ಲಿರುವ ನೌಕರರಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ.

5. ಎನ್‌ಜೆಪಿಸಿ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಹಾಲಿ ಲಭ್ಯವಿರುವ ತುಟ್ಟಿ ಭತ್ಯೆಯ ದರವನ್ನು ಸಹ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ **ಶೇ.154** ರಿಂದ **ಶೇ.164**ಕ್ಕೆ ದಿನಾಂಕ **1ನೇ ಜುಲೈ 2019**ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

6. ಈ ಆದೇಶದನ್ವಯ ಲಭ್ಯವಿರುವ ತುಟ್ಟಿ ಭತ್ಯೆ ಬಾಕಿ ಮೊತ್ತವನ್ನು 2006ರ ಪರಿಷ್ಕೃತ ಯು.ಜಿ.ಸಿ./ಎ.ಐ.ಸಿ.ಟಿ.ಇ. ಮತ್ತು ಎನ್.ಜೆ.ಪಿ.ಸಿ. ವೇತನ ಶ್ರೇಣಿಯಲ್ಲಿ ನವೆಂಬರ್ 2019ರ ಮಾಹೆಯ ವೇತನ ಮತ್ತು ಪಿಂಚಣಿ ಬಟವಾಡೆಗೂ ಮೊದಲೇ ಪಾವತಿ ಮಾಡತಕ್ಕದ್ದಲ್ಲ.

7. 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿದ್ದ ಹಾಗೂ ದಿನಾಂಕ: 01–01–2016ರ ನಂತರದಲ್ಲಿ ನಿವೃತ್ತರಾದ ನಿವೃತ್ತಿ ವೇತನದಾರರಿಗೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

8. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿ ಭತ್ಯೆಯನ್ನು ಮುಂದಿನ ಆದೇಶ ಹೊರಡಿಸುವವರೆಗೆ ನಗದಾಗಿ ಪಾವತಿ ಮಾಡಲಾಗುವುದು.

9. ತುಟ್ಟಿ ಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

10. ತುಟ್ಟಿ ಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್.ಜೋಗೋಜಿ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು–2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ(ಪಿ.ಬಿ. ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ(ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು(ಲೆಕ್ಕಗಳು ಮತ್ತು ಹಕ್ಕುಗಳು),ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ(ಪಿ.ಬಿ. ನಂ.5329),ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
10. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ/ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
11. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
12. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
13. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'ಎ', ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
17. ವಾರಪತ್ರ/ಶಾಖೆಯ ರಕ್ಷಾ ಕಡತ.